ಅಭಿಯಾನ ನಿರ್ದೇಶಕರು

# ರಾಷ್ಟ್ರೀಯ ಆರೋಗ್ಯ ಅಭಿಯಾನ

ಮೊದಲನೇ ಮಹಡಿ, ಕಂಟ್ರೋಲ್ ರೂಮ್ ಕಟ್ಟಡ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಆನಂದರಾವ್ ವೃತ್ತ, ಬೆಂಗಳೂರು-560009.
ದೂರವಾಣಿ ಸಂಖ್ಯೆ: 080 22373587 e-mail: mdnrhmkar@gmail.com

ಸಂಖ್ಯೆ: HFW/NHM/ UHC/MLHP Recruitment/06/2020-21 ದಿನಾಂಕ: 23-06-2020

## ಪ್ರಕಟಣೆ

## ಮಧ್ಯಮ ಹಂತದ ಆರೋಗ್ಯ ಪೂರೈಕೆದಾರ (ಎಮ್.ಎಲ್.ಎಚ್.ಪಿ) ಹುದ್ದೆಗೆ ಗುತ್ತಿಗೆ ಆಧಾರದ ಮೇಲೆ ನೇಮಕಾತಿಗಾಗಿ ಅರ್ಜಿ ಆಹ್ವಾನ ಕುರಿತು

ರಾಷ್ಟ್ರೀಯ ಆರೋಗ್ಯ ಅಭಿಯಾನದಡಿಯಲ್ಲಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ, ಚಿತ್ರದುರ್ಗ, ಚಾಮರಾಜನಗರ, ಶಿವಮೊಗ್ಗ, ಹಾವೇರಿ, ಗದಗ, ಉತ್ತರ ಕನ್ನಡ, ರಾಯಚೂರು ವಿಜಯಪುರ, ಚಿಕ್ಕಮಗಳೂರು, ಬಾಗಲಕೋಟೆ ಜಿಲ್ಲೆಗಳಿಗೆ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು, ಇಚ್ಛೆಯುಳ್ಳ ಅಭ್ಯರ್ಥಿಗಳು ಹೆಲ್ತ್ ಅಂಡ್ ವೆಲ್‌ನೆಸ್ ಸೆಂಟರ್, ಎನ್.ಎಚ್.ಎಂ. ಯೋಜನೆಯಡಿಯಲ್ಲಿ ಎಂ.ಎಲ್.ಎಚ್.ಪಿ ಹುದ್ದೆಗಳಿಗಾಗಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ, ವಿವರಣೆ ಕೆಳಗಿನಂತಿವೆ.

**ವಿದ್ಯಾರ್ಹತೆ:** ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಬಿಎಸ್ಸಿ ನರ್ಸಿಂಗ್/ಪೋಸ್ಟ್ ಬಿಎಸ್ಸಿ ನರ್ಸಿಂಗ್ ಜೊತೆಗೆ ರಾಜ್ಯ ನರ್ಸಿಂಗ್ ಕೌನ್ಸಿಲ್ ಕೆ.ಎನ್.ಸಿ/ಐ.ಎನ್.ಸಿ ನಿಂದ ನೋಂದಣಿ ಹೊಂದಿರಬೇಕು, ಕನ್ನಡ ಹಾಗೂ ಇಂಗ್ಲೀಷ್ ಭಾಷೆಯಲ್ಲಿ ಪ್ರಾವೀಣ್ಯತೆ ಹೊಂದಿರಬೇಕು.

**ಮಾಸಿಕ ಸಂಭಾವನೆ:** ರೂ. 24,200/- ಹೆಚ್ಚಿನ ಆದ್ಯತೆವುಳ್ಳ ಜಿಲ್ಲೆಗಳು (ಶಿವಮೊಗ್ಗ, ಗದಗ, ಉತ್ತರ ಕನ್ನಡ, ರಾಯಚೂರು ವಿಜಯಪುರ, ಚಿಕ್ಕಮಗಳೂರು, ಬಾಗಲಕೋಟೆ) ಹಾಗೂ ರೂ. 22,000 ಇತರೆ ಜಿಲ್ಲೆಗಳು (ಚಿತ್ರದುರ್ಗ, ಚಾಮರಾಜನಗರ, ಹಾವೇರಿ): ಜೊತೆಗೆ ಹೆಚ್ಚುವರಿಯಾಗಿ ಪರಫಾರಮೆನ್ಸ್ ಬೇಸ್ ಇನ್ಸೆಂಟಿವ್ ರೂ. 8,000/-ವರೆಗೆ (ಸೇವಾ ಆಧಾರ ಪರಿಗಣಿಸಿ)

**ವಯೋಮಿತಿ:** ಸಾಮಾನ್ಯ ಅಭ್ಯರ್ಥಿ : 35 ವರ್ಷ; ಎಸ್.ಸಿ/ಎಸ್.ಟಿ/ ಪ್ರವರ್ಗ 1/ಮಾಜಿ ಸೈನಿಕ 40 ವರ್ಷ: 2ಎ/2ಬಿ/3ಎ/3ಬಿ ಹಾಗೂ ಇತರೆ ಹಿಂದುಳಿದ ವರ್ಗ (ರಾಜ್ಯ) 38ವರ್ಷ, ಅಧಿಸೂಚನೆ ಹೊರಡಿಸುವ ದಿನಾಂಕ ಒಳಗಾಗಿ (ವಿ.ಸೂ: ನಾಲ್ಕನೇ ನೇಮಕಾತಿ ಪ್ರಕಟಣೆಯಾದ್ದರಿಂದ ಕಲ್ಯಾಣ ಕರ್ನಾಟಕ (HK) ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ ರೋಸ್ಟರ್ ನಿಯಮಾನುಸಾರ ಇತರೆ (Non HK) ಅಭ್ಯರ್ಥಿಗಳನ್ನು ಹೈದರಾಬಾದ್-ಕರ್ನಾಟಕ ಜಿಲ್ಲೆಗಳಲ್ಲಿ ನೇಮಕಾತಿಗಾಗಿ ಪರಿಗಣಿಸಲಾಗುವುದು).

**ಒಟ್ಟು ಹುದ್ದೆಗಳು:** 1356 ಹುದ್ದೆಗಳು

ಅಭ್ಯರ್ಥಿಗಳು ಕರ್ನಾಟಕದಲ್ಲಿ ಕನಿಷ್ಠ 10 ವರ್ಷ ವಾಸವಿರಬೇಕು ಹಾಗೂ ಕನ್ನಡವನ್ನು ಒಂದು ಭಾಷೆಯಾಗಿ ಎಸ್.ಎಸ್.ಎಲ್.ಸಿ/10ನೇ ತರಗತಿಯಲ್ಲಿ ಅಭ್ಯಾಸಿಸಿರಬೇಕು.

ಅರ್ಜಿಯನ್ನು ಕೇವಲ ಆನ್‌ಲೈನ್ ಮುಖಾಂತರ ಸಂಬಂಧಪಟ್ಟ ದಾಖಲಾತಿಗಳೊಂದಿಗೆ ಸಲ್ಲಿಸಬೇಕು. ಹಾಗೂ ಪರೀಕ್ಷೆಯನ್ನು ಆನ್‌ಲೈನ್ ಮುಖಾಂತರ ನಡೆಸಲಾಗುವದು (ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್ ಸಂಪರ್ಕಿಸಬಹುದು).

ಆನ್‌ಲೈನ್ ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 24/06/2020

ಆನ್‌ಲೈನ್ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 21/07/2020 (ಸಾಯಂಕಾಲ 5.00 ಗಂಟೆವರೆಗೆ)

ಲಿಖಿತ ಪರೀಕ್ಷೆ ಮತ್ತು ಫಲಿತಾಂಶ ಪ್ರಕಟಣೆ ದಿನಾಂಕ: 02/08/2020

ಮೂಲ ದಾಖಲೆಗಳ ಪರಿಶೀಲನೆ ಪ್ರಾರಂಭ: 04/08/2020 ರಿಂದ ಪ್ರಾರಂಭ

ಹೆಚ್ಚಿನ ಮಾಹಿತಿಗಾಗಿ: http://www.karnataka.gov.in/hfw ಸಂಪರ್ಕಿಸಬಹುದು.

**ಸೂಚನೆ:** ನೇಮಕಾತಿ ಸಂಬಂಧಿಸಿದ ತಿದ್ದೋಲೆಗಳನ್ನು ಮೇಲೆ ಸೂಚಿಸಿರುವ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು.

ಸಹಿ/-

DIPR/DDU/RO-372/2020-21

ಅಭಿಯಾನ ನಿರ್ದೇಶಕರು (ಎನ್.ಹೆಚ್.ಎಂ)